**ದಿನಾಂಕ: 09.11.2021 ರಂದು 11-00 ಕ್ಕೆ ಶ್ರೀ ಹೆಚ್. ನಾಗರಾಜಪ್ಪ, ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್-177 (ಜೆ.ಪಿ.ನಗರ) ನಡೆದ ಸಭೆಯ ನಡಾವಳಿಗಳು:**

## : ಚರ್ಚೆಯಾದ ವಿಷಯಗಳು :

1. ವಾಡ್-177ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ ಅಭಿವೃದ್ಧಿ ಕಾಮಗಾರಿಗಳು ಹಾಗೂ ಘನತ್ಯಾಜ್ಯ ನಿರ್ವಹಣೆ ಮತ್ತು ಕೊವಿಡ್-19ರ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

## : ಸಭೆಗೆ ಹಾಜರಾಗಿದ್ದವರ ವಿವರಗಳು :

| | |
|---|---|
| ಅಧ್ಯಕ್ಷರು | ನೋಡಲ್ ಅಧಿಕಾರಿ |
| ಸದಸ್ಯ ಕಾರ್ಯದರ್ಶಿ | ವಾರ್ಡ್ 177ರ ಸಹಾಯಕ ಅಭಿಯಂತರರು |
| ಸದಸ್ಯರುಗಳು | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| ಸದಸ್ಯರುಗಳು | ಬಿಡಬ್ಲ್ಯೂಎಸ್‌ಎಸ್‌ಬಿ ಅಭಿಯಂತರರು |
| ಸದಸ್ಯರುಗಳು | ಜೆ.ಪಿ.ನಗರ ಸಹಾಯಕ ಕಂದಾಯ ಅಧಿಕಾರಿಗಳು |
| ಸದಸ್ಯರುಗಳು | ತೋಟಗಾರಿಕೆ ಅಧಿಕಾರಿ (Horti. Inspector) |
| ಸದಸ್ಯರುಗಳು | ಠಾಣಾಧಿಕಾರಿಗಳು, ನ್ಯಾಯ ಮತ್ತು ಸುವ್ಯವಸ್ಥೆ ಹಾಗೂ ಸಂಚಾರಿ |
| ಸದಸ್ಯರುಗಳು | ಕಂದಾಯ ಪರಿವೀಕ್ಷಕರು, ವಾರ್ಡ್ 177 |
| ಸದಸ್ಯರುಗಳು | ಅರಣ್ಯ ಸಂರಕ್ಷಣಾಧಿಕಾರಿಗಳು |

## :ನಡಾವಳಿಯ ವರದಿ:

- ಅಧ್ಯಕ್ಷರು ಮಾತನಾಡುತ್ತಾ ಹಿಂದಿನ ಸಭೆಯಲ್ಲಿ ಚರ್ಚೆಯಾದ ವಿಷಯಗಳ ಬಗ್ಗೆ ಅಧಿಕಾರಿಗಳು ಕೈಗೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

**ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.**

- ಜೆ.ಪಿ.ನಗರ ವ್ಯಾಪ್ತಿಯ ಸುತ್ತಮುತ್ತಲಿನ ಪ್ರದೇಶಗಳಲ್ಲಿರುವ ಮರದ ರೆಂಬೆ-ಕೊಂಬೆಗಳನ್ನು ಕತ್ತರಿಸುವಂತೆ ಹಾಗೂ ಹಳೆಯ ಮರಗಳನ್ನು ಪರಿಶೀಲಿಸಿ ಕ್ರಮ ಕೈಗೊಳ್ಳುವ ಬಗ್ಗೆ ಚರ್ಚಿಸಲಾಯಿತು.
- ನೀರು ನಿಂತಿರುವ ಜಾಗದಲ್ಲಿ ಸೊಳ್ಳೆ ನಿವಾರಕ ಔಷಧಿಯನ್ನು ಸಿಂಪಡಿಸುವಂತೆ ಕೋರಲಾಯಿತು.
- ಕಟ್ಟಡ ನಿರ್ಮಿಸುತ್ತಿರುವವರು ರಸ್ತೆಬದಿಯಲ್ಲಿ ಡೇಬ್ರಿಸ್‌ಅನ್ನು ಹಾಕುವವರಿಗೆ ದಂಡ ವಿಧಿಸುವಂತೆ ಚರ್ಚಿಸಲಾಯಿತು.
- ಬ್ಲಾಕ್ ಸ್ಪಾಟ್ ಜಾಗವನ್ನು ಸುಂದರಗೊಳಿಸುವಂತೆ ಚರ್ಚಿಸಲಾಯಿತು.

**ಮ.ತಿ.ನೋ**

Scanned with CamScanner

- ಬೀದಿ ವ್ಯಾಪಾರಿ, ಬ್ಲಾಕ್ ಸ್ಪಾಟ್ ಹಾಗೂ ವಾಣಿಜ್ಯ ಕಟ್ಟಡಗಳಲ್ಲಿ ಸಂಜೆ ವೇಳೆಯಲ್ಲಿ ಕಸ ಸಂಗ್ರಹಣೆ ಮಾಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ಕೋರಲಾಯಿತು.
- ಒಣ ತ್ಯಾಜ್ಯ ಸಂಗ್ರಹಣಾ ಘಟಕದಲ್ಲಿ ಸ್ವಚ್ಛತೆಯನ್ನು ಕಾಪಾಡುವಂತೆ ಚರ್ಚಿಸಲಾಯಿತು.
- ಕಸದ ಲಾರಿಯನ್ನು ಒಣ ತ್ಯಾಜ್ಯ ಸಂಗ್ರಹಣಾ ಘಟಕದ ಮುಂದೆ ನಿಲ್ಲಿಸುವುದರಿಂದ ವಾಹನ ಸಂಚಾರಕ್ಕೆ ಅಡಚಣೆಯುಂಟಾಗುವುದಾಗಿ ದೂರಿರುವ ಬಗ್ಗೆ.

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ, ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಹಾಗೂ ಮೂರನೇ ಶನಿವಾರ ಬೆಳಿಗ್ಗೆ 11.00 ಘಂಟೆಗೆ ಇದೇ ರೀತಿಯಾಗಿ ಮಾಸಿಕ 2 ಬಾರಿ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಸಕಾಲದಲ್ಲಿ ಹಾಜರಾಗುವಂತೆ ಹಾಗೂ ಈ ಸಭೆಯಲ್ಲಿ ತಿಳಿಸಿರುವ ಸಮಸ್ಯೆಗಳನ್ನು ಬಗೆಹರಿಸಲು ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಕಿರಿಯ ಅಭಿಯಂತರವರು ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ಹಾಗೂ ಕಿರಿಯ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

Nagaraj - y.
ಅಧ್ಯಕ್ಷರು
ವಾರ್ಡ್ ಸಮಿತಿ, ವಾರ್ಡ್ ನಂ. 177
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

Scanned with CamScanner